# ಅತಿಯಾದ ತನಗೆ-ತನ್ನವರಿಗೆ ಮನೋಭಾವ

## ಕುಟುಂಬದವರಿಗೇ ಟಿಕೆಟ್ ಕೊಟ್ಟರೆ ಉಳಿದವರ ಪಾಡೇನು: ರಮೇಶ್ ಕುಮಾರ್

ಬೆಂಗಳೂರು: 'ಗ್ರಾ.ಪಂ ಸದಸ್ಯನಿಂದ ಹಿಡಿದು ಮಂತ್ರಿ-ಮುಖ್ಯಮಂತ್ರಿವರೆಗಿನ ಎಲ್ಲಾ ಅಧಿಕಾರಗಳು ತನಗೆ ಮತ್ತು ತನ್ನವರಿಗೇ ಸಿಗಬೇಕು ಎಂಬ ಮನೋಧರ್ಮ ರಾಜಕಾರಣಿಗಳಲ್ಲಿ ಹೆಚ್ಚಾಗಿರುವುದು ಅತ್ಯಂತ ಅಪಾಯಕಾರಿ ಬೆಳವಣಿಗೆ' ಎಂದು ವಿಧಾನಸಭೆ ಅಧ್ಯಕ್ಷ ಕೆ.ಆರ್.ರಮೇಶ್ ಕುಮಾರ್ ಕಳವಳ ವ್ಯಕ್ತಪಡಿಸಿದರು.

ನಗರದ ಆದರ್ಶ ರೆಸಿಡೆನ್ಸಿಯಲ್ಲಿ ಸೋಮವಾರ ಹಿರಿಯ ಪತ್ರಕರ್ತ ಸಿ.ಎಂ. ರಾಮಚಂದ್ರ ಅವರ 'ಕಾಕ್‌ಪಿಟ್ ಆಫ್ ಇಂಡಿಯಾಸ್ ಪೊಲಿಟಿಕಲ್ ಬ್ಯಾಟಲ್ಸ್- ಕರ್ನಾಟಕ' ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದ ಅವರು, ಚುನಾವಣೆಗಳಲ್ಲಿ ಸ್ಪರ್ಧಿಸುವವರು ತಮ್ಮ ಮಕ್ಕಳು, ಮೊಮ್ಮಕ್ಕಳೇ ಆಗಬೇಕು ಎಂಬ ಧೋರಣೆಯನ್ನು ಪ್ರಜಾಪ್ರಭುತ್ವದಲ್ಲಿ ಒಪ್ಪಿಕೊಳ್ಳಲು ಸಾಧ್ಯವಿಲ್ಲ. ಚುನಾವಣೆಗಳಲ್ಲಿ ಸ್ಪರ್ಧಿಸಲು ಕೇವಲ ರಾಜಕಾರಣಿಗಳ ಮಕ್ಕಳಿಗೇ ಟಿಕೆಟ್ ಹಂಚುವುದಾದರೆ ಸಮಾಜದಲ್ಲಿ ಇತರೇ ವರ್ಗದವರ ಪಾಡೇನು? ಇದನ್ನು ಪ್ರಶ್ನಿಸುವವರೂ ಇದೀಗ ಮಾಧ್ಯಮ ಕ್ಷೇತ್ರದಲ್ಲಿ ಇಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

**ಸತ್ತುಹೋದ ಆಂತರಿಕ ಪ್ರಜಾಪ್ರಭುತ್ವ:** ರಾಜಕೀಯ ಪಕ್ಷಗಳಲ್ಲಿ ಆಂತರಿಕ ಪ್ರಜಾಪ್ರಭುತ್ವ ಸತ್ತುಹೋಗಿದೆ. ಒಂದೆಡೆ ಹೊಗಳುಭಟರು ಮತ್ತೊಂದೆಡೆ ಭ್ರಷ್ಟರು ಪಕ್ಷದ ನಾಯಕರನ್ನು ಓಲೈಸಿಕೊಳ್ಳಲು ಪೈಪೋಟಿ ನಡೆಸಿದ್ದಾರೆ. ಈ ಭರಾಟೆಯಲ್ಲಿ ಎಲ್ಲದಕ್ಕೂ ಸೈ ಎನ್ನುವ ಸಂಸ್ಕೃತಿ ಮೈಗೂಡಿಸಿಕೊಂಡಿರುವುದರಿಂದ ಪ್ರಜಾಪ್ರಭುತ್ವಕ್ಕೇ ಸಂಚಕಾರ ಬಂದೊದಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಈ ಹಿಂದೆ ತತ್ವ-ಸಿದ್ಧಾಂತಗಳ ಆಧಾರದ ಮೇಲೆ ಪಕ್ಷಗಳು ವಿಭಜನೆ ಆಗುತ್ತಿದ್ದವು. ಆದರೆ, ಇಂದು ತತ್ವ-ಸಿದ್ಧಾಂತಗಳೇ ಕಣ್ಮರೆ ಆಗಿವೆ ಎಂದು ಬೇಸರ ವ್ಯಕ್ತಪಡಿಸಿದ ರಮೇಶ್ ಕುಮಾರ್, ಬೆಂಗಳೂರಿನ ಸುಭಾಷ್‌ನಗರ ಮೈದಾನದಲ್ಲಿ ಚಕ್ರವರ್ತಿ ರಾಜಗೋಪಾಲಾಚಾರಿ, ಎನ್.ಜಿ.ರಂಗಾ, ಕೃಷ್ಣಮೆನನ್, ಅಟಲ್ ಬಿಹಾರಿ ವಾಜಪೇಯಿ ಅವರಂತಹ ಮೇರು ನಾಯಕರ ಸಾರ್ವಜನಿಕ ಸಭೆಗಳಿಗೆ ಜನ ಸಾಗರವೇ ಹರಿದುಬರುತ್ತಿತ್ತು. ಇದೀಗ ಸಾರ್ವಜನಿಕ ಸಭೆಗಳಿಗೆ ಜನರನ್ನು ಕರೆತರಲು ಸಾರಿಗೆ ಸೌಲಭ್ಯ ಕಲ್ಪಿಸುವುದರ ಜತೆಗೆ 'ಪ್ಯಾಕೆಟ್ ಟು ಪೇಮೆಂಟ್' ಅಂದರೆ ಊಟದ ಬುತ್ತಿಯಿಂದ ಹಿಡಿದು ಸಂಭಾವನೆವರೆಗೆ ವ್ಯವಸ್ಥೆ ಮಾಡಬೇಕಾಗಿದೆ. ಇದು ಈಗಿನ ಪರಿಸ್ಥಿತಿ ಎಂದು ಹೇಳಿದರು.

**ಬೆಂಗಳೂರಿಗರಿಗೆ ನೈತಿಕತೆ ಇಲ್ಲ:** ಬೆಂಗಳೂರಿನಲ್ಲಿ ಅತ್ಯಂತ ಸುಶಿಕ್ಷಿತರು ಹಾಗೂ ಪ್ರಜ್ಞಾವಂತರು ಇದ್ದಾರೆ ಎಂದು ಹೇಳುತ್ತಾರೆ. ಆದರೆ, ಮತದಾನದ ಅಂಕಿ-ಅಂಶಗಳನ್ನು ಅವಲೋಕಿಸಿದಾಗ, ತಮ್ಮ ಹಕ್ಕನ್ನೇ ತ್ಯಾಗ ಮಾಡಿದ ಮಹನೀಯರು ರಾಜ್ಯದ ರಾಜಧಾನಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಗ್ರಾಮೀಣ ಪ್ರದೇಶದ ಅನಕ್ಷರಸ್ಥರಲ್ಲಿ ಇರುವ ಕಾಳಜಿ ನಗರದ ಜನರಲ್ಲಿಲ್ಲ. ಹಾಗಾಗಿ, ಬೆಂಗಳೂರಿಗರಿಗೆ ಅಭಿಪ್ರಾಯ ಪ್ರಕಟಿಸುವ ನೈತಿಕ ಹಕ್ಕೂ ಇಲ್ಲ ಎಂದು ರಮೇಶ್ ಕುಮಾರ್ ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಸಚಿವ ಪ್ರೊ.ಬಿ.ಕೆ. ಚಂದ್ರಶೇಖರ್, 'ಉದಯವಾಣಿ' ಅಂಕಣಕಾರ ಆರಕೆರೆ ಜಯರಾಂ, ಸಿ.ಎಂ. ರಾಮಚಂದ್ರ, ಹಿರಿಯ ಪತ್ರಕರ್ತರಾದ ಎಸ್.ಕೆ. ಶೇಷಚಂದ್ರಿಕ, ಟಿ.ಎಸ್. ರಂಗಣ್ಣ ಮತ್ತಿತರರು ಉಪಸ್ಥಿತರಿದ್ದರು.



'ಕಾಕ್‌ಪಿಟ್ ಆಫ್ ಇಂಡಿಯಾಸ್ ಪೊಲಿಟಿಕಲ್ ಬ್ಯಾಟಲ್ಸ್- ಕರ್ನಾಟಕ' ಪುಸ್ತಕವನ್ನು ಸ್ಪೀಕರ್ ರಮೇಶ್‌ಕುಮಾರ್ ಬಿಡುಗಡೆ ಮಾಡಿದರು.